ಕರ್ನಾಟಕ ಸರ್ಕಾರ

ಸಂ:ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2023-24 ಆಯುಕ್ತರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ನಂ.16-ಡಿ, ಡಿ. ದೇವರಾಜ ಅರಸು ಭವನ, 3ನೇ ಮಹಡಿ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ,
ಬೆಂಗಳೂರು-560 052, ದಿನಾಂಕ:20.12.2023.

ಗೆ,

ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ **"ಅತೀ ಜರೂರು"**

ಮಾನ್ಯರೆ,

ವಿಷಯ: 2023-24 ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಆಫ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

ಉಲ್ಲೇಖ: ಈ ಕಛೇರಿಯ ಪ್ರಕಟಣೆ ಸಂಖ್ಯೆ:ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2023-24, ದಿನಾಂಕ: 20.12.2023.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖದಲ್ಲಿ 2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ (ದಿನಾಂಕ:30.01.2023 ಮತ್ತು ಅದರ ನಂತರ ಪ್ರಥಮ ವರ್ಷದ ಪಿಎಚ್.ಡಿ ಪ್ರಾರಂಭಿಸಿರಬೇಕು) ಹಿಂದುಳಿದ ವರ್ಗಗಳ ಅರ್ಹ ಹೊಸ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿಗಳನ್ನು ಉಲ್ಲೇಖದಲ್ಲಿ ಆಹ್ವಾನಿಸಲಾಗಿದ್ದು, ಜಿಲ್ಲಾವಾರು ಸಲ್ಲಿಕೆಯಾಗುವ ಅರ್ಜಿಗಳ ಪರಿಶೀಲನೆ ಮಾಡುವ ಜವಾಬ್ದಾರಿಯನ್ನು ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ನೀಡಲಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಈ ಕೆಳಗಿನಂತೆ ಕ್ರಮವಹಿಸಲು ಸೂಚಿಸಲಾಗಿದೆ.

1. ಯೋಜನೆಯ ಅನುಷ್ಠಾನಕ್ಕೆ ನಿಗದಿಪಡಿಸಿರುವ ವೇಳಾಪಟ್ಟಿಯಂತೆ ಕಾರ್ಯನಿರ್ವಹಿಸುವುದು.

| ಕ್ರ. ಸಂ. | **ಚಟುವಟಿಕೆಗಳು** | **ನಿಗದಿಪಡಿಸಿದ ದಿನಾಂಕ** |
|---|---|---|
| 1 | ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ | **21.12.2023** |
| 2 | ಅಭ್ಯರ್ಥಿಗಳು ಅರ್ಜಿ ಮತ್ತು ಮೂಲ ದಾಖಲೆಗಳನ್ನು ಸಲ್ಲಿಸಲು ಕೊನೆಯ ದಿನಾಂಕ | **10.01.2024 ರ ಸಂಜೆ 5.30 ಗಂಟೆ** |
| 3 | ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ ಪೂರ್ಣಗೊಳಿಸುವುದು. | **10.01.2024 ರ ಸಂಜೆ 5.30 ಗಂಟೆ** |
| 4 | ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಆಯಾ ಜಿಲ್ಲೆಯಲ್ಲಿ ಸಲ್ಲಿಕೆಯಾದ ಅರ್ಜಿ ಮತ್ತು ದಾಖಲೆಗಳನ್ನು ಪರಿಶೀಲಿಸಿ, ಅರ್ಹ ಮತ್ತು ಅನರ್ಹ ಅಭ್ಯರ್ಥಿಗಳ ಮಾಹಿತಿಯನ್ನು ಎಂ.ಎಸ್.ಎಕ್ಸೆಲ್ ನ ನಿಗದಿತ ನಮೂನೆಯಲ್ಲಿ ದಾಖಲಿಸಿ, ಸಾಫ್ಟ್ ಕಾಫಿಯಲ್ಲಿ ಕೇಂದ್ರ ಕಛೇರಿಗೆ ಒದಗಿಸುವುದು. | **12.01.2024 ರ ಸಂಜೆ 4.00 ಗಂಟೆ** |

2. 2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ಅಭ್ಯರ್ಥಿಗಳು ತಾವು ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ಜಿಲ್ಲೆಯ ಜಿಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ತಮ್ಮ ಅರ್ಜಿಯ ಪ್ರತಿ ಹಾಗೂ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿಯನ್ನು ಸಲ್ಲಿಸಬೇಕಾಗಿದ್ದು, ಅದರಂತೆ ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಅರ್ಜಿಯ ಪ್ರತಿ ಹಾಗೂ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿಯನ್ನು ಅಭ್ಯರ್ಥಿಗಳಿಂದ ಪಡೆಯುವುದು ಹಾಗೂ ಮಾಹಿತಿಗಾಗಿ ತಮ್ಮ ಕಛೇರಿಯಲ್ಲಿ ನಿರ್ವಹಿಸುವುದು (ಅರ್ಜಿ ಮತ್ತು ಮುಚ್ಚಳಿಕೆ ಪತ್ರ original ಆಗಿರಬೇಕು)
3. ಈ ರೀತಿ ಪಡೆದ ಆಫ್-ಲೈನ್ ಅರ್ಜಿ ಹಾಗೂ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿಯನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಅಭ್ಯರ್ಥಿಗಳು ನೀಡುವ ಮೂಲ ದಾಖಲೆಗಳೊಂದಿಗೆ ತಾಳೆ ಮಾಡಿ ಪರಿಶೀಲಿಸುವುದು ಹಾಗೂ ಪರೀಶೀಲನೆಯ ನಂತರ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಅಭ್ಯರ್ಥಿಗಳಿಗೆ ಸ್ಥಳದಲ್ಲಿಯೇ ಹಿಂದಿರುಗಿಸುವುದು.
4. ಅಭ್ಯರ್ಥಿಗಳು ಸಲ್ಲಿಸುವ ಅರ್ಜಿ ಮತ್ತು ದಾಖಲೆಗಳಲ್ಲಿನ ವಿವರಗಳನ್ನು ಕೇಂದ್ರ ಕಛೇರಿಯಿಂದ ನೀಡುವ ನಿಗದಿತ ಎಂ.ಎಸ್. ಎಕ್ಸೆಲ್ ಶೀಟ್ ನಮೂನೆಯಲ್ಲಿ ನಮೂದಿಸುವುದು ಹಾಗೂ ದಾಖಲೆಗಳ ಪರಿಶೀಲನೆಯನ್ವಯ ಅಭ್ಯರ್ಥಿಯು ಸದರಿ ವ್ಯಾಸಂಗ ವೇತನಕ್ಕೆ ಅರ್ಹ ಅಥವಾ ಅನರ್ಹವಿರುವ ಬಗ್ಗೆ ಕ್ರಮವಾಗಿ Approved/Rejected ಎಂದು ನಮೂದಿಸುವುದು ಹಾಗೂ Rejected ಆದಲ್ಲಿ ಯಾವ ಕಾರಣಕ್ಕಾಗಿ ಎಂಬುದನ್ನು ಷರಾ ಭಾಗದಲ್ಲಿ ನಮೂದಿಸಿ ಆಯುಕ್ತರ ಕಛೇರಿಗೆ ಮಾಹಿತಿಯನ್ನು ಸಾಫ್ಟ್ ಕಾಪಿಯಲ್ಲಿ ಸಲ್ಲಿಸುವುದು.
5. ಮೂಲ ದಾಖಲೆಗಳ ಪರಿಶೀಲನೆಯ ಸಂದರ್ಭದಲ್ಲಿ ಅಭ್ಯರ್ಥಿಗಳಿಂದ ಪಡೆಯ ಬೇಕಾದ ದೃಢೀಕೃತ ದಾಖಲೆಗಳು ಈ ಕೆಳಗಿನಂತಿವೆ-

- ಭರ್ತಿ ಮಾಡಿದ ಅರ್ಜಿ ಪ್ರತಿ (2 ಭಾವಚಿತ್ರ ಒಳಗೊಂಡಂತೆ)
- ಎಸ್.ಎಸ್.ಎಲ್.ಸಿ/10ನೇ ತರಗತಿಯ ಅಂಕಪಟ್ಟಿ.
- ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
- ವಾಸಸ್ಥಳ ಪ್ರಮಾಣ ಪತ್ರ.
- ಸ್ನಾತಕೋತ್ತರ ಪದವಿಯ ಅಂಕಪಟ್ಟಿಗಳು.
- ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ (Convocation Certificate).
- ಪಿಎಚ್.ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿರುವ ಬಗ್ಗೆ ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಯಿಂದ ಪ್ರಮಾಣ ಪತ್ರ (ಇದರಲ್ಲಿ ನೋಂದಣಿ ದಿನಾಂಕವು ಕಡ್ಡಾಯವಾಗಿ ನಮೂದಾಗಿರಬೇಕು)
- ಇತರೆ ಯಾವುದೇ ಮೂಲಗಳಿಂದ ವ್ಯಾಸಂಗ ವೇತನಕ್ಕೆ ಆಯ್ಕೆಯಾಗದಿರುವ ಬಗ್ಗೆ ಶಿಕ್ಷಣ ಸಂಸ್ಥೆ/ಕಾಲೇಜು/ವಿಶ್ವವಿದ್ಯಾಲಯ/ ಅಧಿಕೃತ ಸಂಸ್ಥೆಯಿಂದ ನಿಗದಿತ ನಮೂನೆಯಲ್ಲಿ ದೃಢೀಕರಣ ಪತ್ರ. (ಇದಕ್ಕೆ ಸಂಬಂಧಿಸಿದ ನಮೂನೆಯನ್ನು ಇಲಾಖಾ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ಭರ್ತಿ ಮಾಡಿ ಸಂಬಂಧಿಸಿದವರಿಂದ ದೃಢೀಕರಿಸಿ ಸಲ್ಲಿಸುವುದು).
- ಬ್ಯಾಂಕ್ ಖಾತೆ ವಿವರ - ಆಯ್ಕೆಯಾಗುವ ಅರ್ಹ ಅಭ್ಯರ್ಥಿಗಳಿಗೆ ಆಧಾರ್ ಲಿಂಕ್ ಆಗಿರುವ ಬ್ಯಾಂಕ್ ಖಾತೆಗೆ ಮಾತ್ರ ವ್ಯಾಸಂಗ ವೇತನ ಪಾವತಿಸುವುದರಿಂದ, ಅಭ್ಯರ್ಥಿಗಳು ತಮ್ಮ ಆಧಾರ್ ಲಿಂಕ್ ಆಗಿರುವ ಮತ್ತು ಪ್ರಸಕ್ತ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ವಿವರವನ್ನು ಮಾತ್ರ ನೀಡುವುದು (ಜಂಟಿ/ಮೈನರ್ ಬ್ಯಾಂಕ್ ಖಾತೆಗಳ ವಿವರ ಸಲ್ಲಿಸಿದಲ್ಲಿ, ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು).

- ಆಧಾರ್ ಕಾರ್ಡ್ ಪ್ರತಿ.
- ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಮತ್ತು ಕರ್ನಾಟಕ ರಾಜ್ಯದಲ್ಲಿರುವ ವಿಶ್ವವಿದ್ಯಾಲಯದಲ್ಲಿ 2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಹೆಚ್.ಡಿ ಅಧ್ಯಯನಕ್ಕೆ ದಾಖಲಾಗಿರುವ ಶುಲ್ಕದ ರಶೀದಿ.
- ವಿಶೇಷ ಚೇತನ ಅಭ್ಯರ್ಥಿಯಾಗಿದ್ದಲ್ಲಿ, ಆ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- ಅಭ್ಯರ್ಥಿಯ ಪಾಸ್ ಪೋರ್ಟ್ ಅಳತೆಯ ಇತ್ತೀಚಿನ 2 ಭಾವಚಿತ್ರಗಳು.
- ಮುಚ್ಚಳಿಕೆ ಪ್ರಮಾಣ ಪತ್ರ (ನಮೂನೆ ಇಲಾಖಾ ವೆಬ್-ಸೈಟ್ ನಲ್ಲಿ ಲಭ್ಯವಿರುತ್ತದೆ. ರೂ.20/- ರ ಛಾಪಾ ಕಾಗದ [ಒಂದನೇ ಪಾಟಿ  ಅಭ್ಯರ್ಥಿ ಹಾಗೂ 2ನೇ ಪಾರ್ಟಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಎಂಬುದಾಗಿ ಛಾಪಾ ಕಾಗದ ಪಡೆಯುವುದು] ದಲ್ಲಿ ಮಾಹಿತಿ ನಮೂದಿಸಿ ಸಹಿಗಳನ್ನೊಳಗೊಂಡ Original ಪ್ರತಿ ಸಲ್ಲಿಸಬೇಕು. )

ನಿಮ್ಮ ವಿಶ್ವಾಸಿ,

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು

ಕರ್ನಾಟಕ ಸರ್ಕಾರ

ಸಂ:ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2023-24 ಆಯುಕ್ತರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ನಂ.16-ಡಿ, ಡಿ. ದೇವರಾಜ ಅರಸು ಭವನ, 3ನೇ ಮಹಡಿ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ,
ಬೆಂಗಳೂರು-560 052, ದಿನಾಂಕ:20.12.2023.

ಗೆ,

ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ **"ಅತೀ ಜರೂರು"**

ಮಾನ್ಯರೆ,

ವಿಷಯ: 2023-24 ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನವನ್ನು ಪ್ರಾರಂಭಿಸಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಆಫ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

ಉಲ್ಲೇಖ: ಸಂಖ್ಯೆ: ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2023-24, ದಿನಾಂಕ: 20.12.2023.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲೆಗಳ ಸ್ಥಳೀಯ ದಿನ ಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಬೇಕಾದ ಪ್ರಕಟಣೆಯ ಮಾದರಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ಸದರಿ ಪ್ರಕಟಣೆಯನ್ನು ನಿಮ್ಮ ಜಿಲ್ಲೆಯ ಸ್ಥಳೀಯ ದಿನ ಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಿ ವ್ಯಾಪಕ ಪ್ರಚಾರ ನೀಡಲು ಹಾಗೂ ಈ ಪತ್ರದೊಂದಿಗೆ ಲಗತ್ತಿಸಿರುವ ದೊಡ್ಡ ಅಕ್ಷರಗಳ ಪ್ರಕಟಣೆಯನ್ನು ಸಾರ್ವಜನಿಕರ ಗಮನಕ್ಕಾಗಿ ಈ ಕೆಳಗಿನ ಕಛೇರಿ/ವಿಶ್ವವಿದ್ಯಾಲಯ/ಪಿಎಚ್.ಡಿ ಅಧ್ಯಯನ ಕೇಂದ್ರಗಳ ಸೂಚನಾ ಫಲಕಗಳಲ್ಲಿ ಕಡ್ಡಾಯವಾಗಿ ಪ್ರಕಟಿಸಲು ಸೂಚಿಸಿದೆ.

1. ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿ.
2. ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ಕಛೇರಿ.
3. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ.
4. ಎಲ್ಲಾ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ.
5. ಜಿಲ್ಲೆಗಳಲ್ಲಿ ಪಿಎಚ್.ಡಿ ಕೋರ್ಸ್ ಗಳಿರುವ ಶಿಕ್ಷಣ ಸಂಸ್ಥೆ/ಕಾಲೇಜು/ ವಿಶ್ವವಿದ್ಯಾಲಯಗಳ ಸೂಚನಾ ಫಲಕಗಳಲ್ಲಿ.

ನಿಮ್ಮ ವಿಶ್ವಾಸಿ,

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.

## ಜಿಲ್ಲೆಗಳ ಸ್ಥಳೀಯ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಬೇಕಾದ ಪ್ರಕಟಣೆಯ ಮಾದರಿ

**ಕರ್ನಾಟಕ ಸರ್ಕಾರ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-560 052.

### ಪ್ರಕಟಣೆ

ಸಂಖ್ಯೆ: ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2023-24 ದಿನಾಂಕ:20.12.2022.

2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ (ದಿನಾಂಕ:30.01.2023 ಮತ್ತು ಅದರ ನಂತರ ಪ್ರಥಮ ವರ್ಷದ ಪಿಎಚ್.ಡಿ ಪ್ರಾರಂಭಿಸಿರಬೇಕು) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-I, II (ಎ), III(ಎ) ಹಾಗೂ III(ಬಿ) ಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2023-24ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ಧ ವಿಶ್ವ ವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರ ಆಫ್-ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:10.01.2024 ರ ಸಂಜೆ 5.30 ಗಂಟೆ**. ಹೆಚ್ಚಿನ ವಿವರಗಳು ಇಲಾಖಾ **ವೆಬ್ ಸೈಟ್ https://bcwd.karnataka.gov.in** ನಲ್ಲಿ ಲಭ್ಯವಿದ್ದು, ಅಭ್ಯರ್ಥಿಗಳು ಎಲ್ಲಾ ಮಾಹಿತಿಯನ್ನು ಓದಿ, ತಿಳಿದುಕೊಂಡು ನಂತರ ಅರ್ಜಿ ಸಲ್ಲಿಸುವುದು.

ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: 8050770004 (ಕಛೇರಿ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 05.30 ರವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.

ಜಿಲ್ಲಾ ಅಧಿಕಾರಿಗಳು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
________________ ಜಿಲ್ಲೆ

**ಕರ್ನಾಟಕ ಸರ್ಕಾರ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-560 052.

**ಪ್ರಕಟಣೆ**

ಸಂಖ್ಯೆ: ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2023-24 ದಿನಾಂಕ:20.12.2023.

**2023-24ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿ ಆಹ್ವಾನ.**

2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ (ದಿನಾಂಕ:30.01.2023 ಮತ್ತು ಅದರ ನಂತರ ಪ್ರಥಮ ವರ್ಷದ ಪಿಎಚ್.ಡಿ ಪ್ರಾರಂಭಿಸಿರಬೇಕು) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-I, II (ಎ), III(ಎ) ಹಾಗೂ III(ಬಿ) ಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2023-24ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ಧ ವಿಶ್ವ ವಿದ್ಯಾಲಯಗಳಲ್ಲಿ/ ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರ ಆಫ್-ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:10.01.2024 ರ ಸಂಜೆ 5.30 ಗಂಟೆ**. ಹೆಚ್ಚಿನ ವಿವರಗಳು ಇಲಾಖಾ **ವೆಬ್ ಸೈಟ್ https://bcwd.karnataka.gov.in** ನಲ್ಲಿ ಲಭ್ಯವಿದ್ದು, ಅಭ್ಯರ್ಥಿಗಳು ಎಲ್ಲಾ ಮಾಹಿತಿಯನ್ನು ಓದಿ, ತಿಳಿದುಕೊಂಡು ನಂತರ ಅರ್ಜಿ ಸಲ್ಲಿಸುವುದು.

**ಕೆಲವು ಮುಖ್ಯ ಅರ್ಹತೆ ಮತ್ತು ಸೂಚನೆಗಳು**:

ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
ಆ) ಹಿಂದುಳಿದ ವರ್ಗಗಳ ಪ್ರವರ್ಗ-I, II(ಎ), III(ಎ) ಅಥವಾ III(ಬಿ) ಸೇರಿರಬೇಕು.
ಇ) ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ -

| **ಕ್ರ.ಸಂ.** | **ಪ್ರವರ್ಗ** | **ಆದಾಯ ಮಿತಿ** |
|---|---|---|
| 1 | I | ರೂ.4.50 ಲಕ್ಷ |
| 2 | II(ಎ), III(ಎ) ಹಾಗೂ III(ಬಿ) | ರೂ.3.50 ಲಕ್ಷ |

ಈ) ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು.
ಉ) ಅಭ್ಯರ್ಥಿಗಳು ಪೂರ್ಣಾವಧಿ ಪಿಎಚ್.ಡಿ ಅಧ್ಯಯನಕ್ಕಾಗಿ ಮಾಡಿಸುವ ನೋಂದಣಿ ದಿನಾಂಕವು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸುವ ಕೊನೆಯ ದಿನಾಂಕಕ್ಕೆ ಹಿಂದಿನ 2 ವರ್ಷದೊಳಗಿದ್ದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.

ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: 8050770004 (ಕಛೇರಿ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 05.30 ರವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.